ದಿನಾಂಕ : 05.12.2019 ರಂದು ಸಾಕ್ಷಿದಾರರನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆಃ – ಶ್ರೀ ಎಸ್.ಎನ್. ವಾದಿ ಪರ ವಕೀಲರಿಂದಃ

ನಾನು ಈ ದಾವೆಯಲ್ಲಿ ವಾದಿಯಾಗಿರುತ್ತೇನೆ. ನಾನು ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದೇನೆ ಅದನ್ನು ನಾನು ನನ್ನ ವಕೀಲರಿಗೆ ಹೇಳಿ ಬರೆಸಿರುತ್ತೇನೆ. ಅದರಲ್ಲಿರುವ ಸಂಗತಿಗಳೆಲ್ಲಾ ಸತ್ಯವಿರುತ್ತದೆ ಮತ್ತು ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ.

ನಾನು ನನ್ನ ದಾವೆ ಹಾಗೂ ಮಧ್ಯಂತರ ಅರ್ಜಿಯ ಜೊತೆಗೆ ಕೆಲವು ದಾಖಲೆಗಳನ್ನು ಹಾಜರುಪಡಿಸಿರುತ್ತೇನೆ.

ದಿನಾಂಕ 12.04.1970 ರ ನೋಂದಾಯಿತ ಕ್ರಯ ಪತ್ರವನ್ನು ಹಾಜರುಪಡಿಸಿದ್ದು, ಅದನ್ನು ನಿಪಿ–1 ಎಂದು, ದಿನಾಂಕ 31.07.1974 ರ ನೋಂದಾಯಿತ ಕ್ರಯ ಪತ್ರವನ್ನು ಹಾಜರುಪಡಿಸಿದ್ದು, ಅದನ್ನು ನಿಪಿ–2 ಎಂದು, ದಿನಾಂಕ 16.07.1987 ರ ನೋಂದಾಯಿತವಲ್ಲದ ಕ್ರಯದ ಕರಾರನ್ನು ಹಾಜರುಪಡಿಸಿದ್ದು, ಅದನ್ನು ನಿಪಿ–3 ಎಂದು, ದಿನಾಂಕ 07.01.1988 ರ ನೋಂದಾಯಿತವಲ್ಲದ ಕ್ರಯದ ಕರಾರನ್ನು ಹಾಜರುಪಡಿಸಿದ್ದು, ಅದನ್ನು ನಿಪಿ–4 ಎಂದು, ದಿನಾಂಕ 30.11.1989 ರ ನೋಂದಾಯಿತ ಕ್ರಯ ಪತ್ರವನ್ನು ಹಾಜರುಪಡಿಸಿದ್ದು, ಅದನ್ನು ನಿಪಿ–5 ಎಂದು, ಋಣಭಾರ ರಾಹಿತ್ಯ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು, ಅದನ್ನು ನಿಪಿ–6 ಎಂದು, ಎರಡು ಕೈ ಬರಹದ ಪಹಣಿ ಪತ್ರಿಕೆ ಹಾಗೂ 6 ಗಣಕೀಕೃತ ಪಹಣಿ ಪತ್ರಿಕೆಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ಕ್ರಮವಾಗಿ ನಿಪಿ-7 ರಿಂದ ನಿಪಿ–14 ಎಂದು, ದಿನಾಂಕ 06.02.2018 ರಂದು ವಾದಿಯು ಪ್ರತಿವಾದಿಗಳಿಗೆ ವಕೀಲರ ಮೂಲಕ ಕಳುಹಿಸಿದ ಕಾನೂನು ತಿಳುವಳಿಕೆ ಪತ್ರದ ಕಚೇರಿ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿ– 15 ಎಂದು, ಒಂಭತ್ತು ಅಂಚೆ ರಶೀದಿಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ನಿಪಿ– 16 ರಿಂದ ನಿಪಿ–24 ಎಂದು, ನಾಲ್ಕು ಅಂಚೆ ಸ್ವೀಕೃತಿಗಳನ್ನು ಹಾಜರು ಪಡಿಸಿದ್ದು ಅವುಗಳನ್ನು ನಿಪಿ–25 ರಿಂದ ನಿಪಿ–28 ಎಂದು ಗುರುತಿಸಲಾಯಿತು. ಐದು ಜಾರಿಯಾಗದೇ ಹಿಂತಿರುಗಿ ಬಂದ ನೋಟೀಸ್‌ನ ಅಂಚೆ ಲಕೋಟೆಯನ್ನು ಹಾಜರುಪಡಿಸಿದ್ದು, ಅವುಗಳನ್ನು ಕ್ರಮವಾಗಿ ನಿಪಿ-29 ರಿಂದ ನಿಪಿ–33 ಎಂದು ಗುರುತಿಸಲಾಯಿತು. ಅವುಗಳನ್ನು ಒಡೆದು ನೋಡಲಾಗಿ ಅವುಗಳಲ್ಲಿರುವ ಕಾನೂನು ತಿಳುವಳಿಕೆ ಪತ್ರವನ್ನು ನಿಪಿ-29(ಎ),30(ಎ),31(ಎ),32(ಎ)

ಹಾಗೂ 33(ಎ) ಎಂದು ಗುರುತಿಸಲಾಯಿತು. ದಿನಾಂಕ 15.04.1973 ರ ನೋಂದಾಯಿತ ಕ್ರಯ ಪತ್ರದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ಅದನ್ನು ನಿಪಿ–34 ಎಂದು, ಒಂದು ಪಹಣಿ ಪತ್ರಿಕೆಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿ–35 ಎಂದು, 5 ನೇ ಪ್ರತಿವಾದಿ ನೀಡಿದ ಪ್ರತ್ಯುತ್ತರವನ್ನು ಹಾಜರುಪಡಿಸಿದ್ದು, ಅದನ್ನು ನಿಪಿ–36 ಎಂದು ಗುರುತಿಸಲಾಯಿತು.

5 ನೇ ಪ್ರತಿವಾದಿ ಪರ ವಕೀಲರು ಗೈರು ಹಾಜರಿದ್ದ ಕಾರಣ ಪಾಟೀ ಸವಾಲು ಮುಂದೂಡಲಾಯಿತು.

( ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಿಂದ ಬೆರಳಚ್ಚು ಪಡಿಸಲಾಯಿತು.)

ಓ ಹೇ ಕೇ ಸ ಇದೆ,

(ಸಂತೋಷ ಕೊಠಾರಿ )
ಅಪರ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾದಂ., ಕೊಳ್ಳೇಗಾಲ